ಸುದ್ದಿ ಸಿಂಚನ

ಖೋಖೋ: ಕದಂಬ ಶಾಲೆ ವಿದ್ಯಾರ್ಥಿಗಳಿಗೆ ಬೆಳ್ಳಿ

ಶಿರಾ: ರಾಷ್ಟ್ರಮಟ್ಟದ ಬಾಲಕರ ಖೋಖೋ ಪಂದ್ಯಾವಳಿಯಲ್ಲಿ ನಗರದ ಕದಂಬ ಶಾಲೆಯ ವಿದ್ಯಾರ್ಥಿಗಳು ಭಾಗವಹಿಸಿ ಬೆಳ್ಳಿಯ ಪದಕ ಪಡೆದಿದ್ದಾರೆ. ತಮಿಳುನಾಡಿನ ತಿರಪುರನಲ್ಲಿ ನಡೆದ ರಾಷ್ಟ್ರಮಟ್ಟದ ಐಸಿಎಸ್‌ಇ ಬಾಲಕರ ಖೋಖೋ ಪಂದ್ಯಾವಳಿಯಲ್ಲಿ ಕದಂಬ ಶಾಲೆಯ ವಿದ್ಯಾರ್ಥಿಗಳಾದ ಶ್ರೇಯಸ್, ಗೌತಮ್. ಆರ್, ಶಶಾಂಕ್, ಶಿವು ಅವರು ಕರ್ನಾಟಕ ತಂಡವನ್ನು ಪ್ರತಿನಿಧಿಸಿ ಬೆಳ್ಳಿಯ ಪದಕವನ್ನು ಜಯಿಸುವುದರೊಂದಿಗೆ ರಾಜ್ಯಕ್ಕೆ ಹಾಗೂ ಶಾಲೆಗೆ ಕೀರ್ತಿ ತಂದಿದ್ದಾರೆ.

ಶ್ರೀ ಕಾಡ ಸಿದ್ದೇಶ್ವರ ಮಠದಲ್ಲಿ ಬನ್ನಿಪೂಜೆ

ತಿಪಟೂರು: ಧಾರ್ಮಿಕ ಪರಂಪರೆಯ ಇತಿಹಾಸವಿರುವ ದೇಶದಲ್ಲಿ ಎಲ್ಲಾ ರಾಜ್ಯಗಳಲ್ಲಿಯೂ ಶರನ್ನವರಾತ್ರಿ ಆಚರಣೆ ಸಂಪ್ರದಾಯವಾಗಿದೆ ಎಂದು ಶ್ರೀ ಕಾಡ ಸಿದ್ದೇಶ್ವರ ಮಠದ ಡಾ. ಕರಿವೃಷಭ ದೇಶಿಕೇಂದ್ರ ಸ್ವಾಮೀಜಿ ಆಶಿಸಿದರು. ಮಠದಲ್ಲಿ ಈ ಬಾರಿಯ ನವರಾತ್ರಿಯಲ್ಲಿ ದೇಶ ಮತ್ತು ರಾಜ್ಯದ ಜನರಿಗೆ, ಸೈನಿಕ, ರೈತರಿಗೆ, ವಿದ್ಯಾರ್ಥಿಗಳಿಗೆ ಶುಭವಾಗಲೆಂದು ನಮ್ಮ ಕಿರಿಯ ಶ್ರೀಗಳು 9 ದಿನ ಶ್ರೀ ಚಾಮುಂಡೇಶ್ವರಿ ದೇವಿಗೆ ಮೌನ ನೆರವೇರಿಸಿದ್ದಾರೆ. ಹಾಗಾಗಿ ಮುಂದಿನ ದಿನಗಳಲ್ಲಿ ದೇಶ ಮತ್ತು ರಾಜ್ಯ ಸುಭಿಕ್ಷವಾಗಿರುತ್ತದೆ ಎಂದರು.

ಪಿಎಸಿಎಸ್ ಅಧ್ಯಕ್ಷರಾಗಿ ಎಂ.ಸಿದ್ದಲಿಂಗಪ್ಪ ಆಯ್ಕೆ

ತುರುವೇಕೆರೆ: ತಾಲೂಕಿನ ಕೊಡಗಿಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ಅಧ್ಯಕ್ಷರಾಗಿ ಕೊಡಗಿಹಳ್ಳಿಯ ಎಂ.ಸಿದ್ದಲಿಂಗಪ್ಪ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. 13 ಸದಸ್ಯ ಬಲ ಹೊಂದಿರುವ ಕೊಡಗಿಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಸ್ಥಾನಕ್ಕೆ ಕೆ.ಬಿ. ದೇವರಾಜು ನೀಡಿದ ರಾಜೀನಾಮೆಯಿಂದಾಗಿ ಅಧ್ಯಕ್ಷ ಸ್ಥಾನ ತೆರವಾಗಿತ್ತು. ಸೋಮವಾರ ನಡೆದ ಚುನಾವಣೆಗೆ ಎಂ.ಸಿದ್ದಲಿಂಗಪ್ಪ ಒಬ್ಬರೇ ನಾಮಪತ್ರ ಸಲ್ಲಿಸಿದ್ದರಿಂದ ಅವಿರೋಧವಾಗಿ ಆಯ್ಕೆಯಾದರು. ಉಪಾಧ್ಯಕ್ಷರಾದ ಎಸ್.ಪಿ.ವೆಂಕಟೇಶ್, ನಿರ್ದೇಶಕರಾದ ಪುಟ್ಟಸ್ವಾಮಿಗೌಡ, ಪಾಂಡುರಂಗಯ್ಯ, ಕೆಂಪಮ್ಮ, ದಿನೇಶ್‌ಬಾಬು, ಕೆ.ಸಿ.ಸಿದ್ದಯ್ಯ, ರಂಗಯ್ಯ, ಚಿಕ್ಕಹನುಮಯ್ಯ, ಟಿ.ಆರ್. ಜಯಲಕ್ಷಿ ಎಸ್.ಹರ್ಷ, ಮುಖ್ಯ ಕಾರ್ಯನಿರ್ಹಣಾಧಿಕಾರಿ ಬಿ.ಎನ್. ಮಹೇಶ್ವರ್, ಪಟ್ಟಣ ಪಂಚಾಯಿತಿ ಸದಸ್ಯರಾದ ಯಜಮಾನ್ ಮಹೇಶ್, ರುದ್ರೇಶ್, ಟಿಎಪಿಸಿಎಂಎಸ್‌ನ ಕಾರ್ಯದರ್ಶಿ ಲೋಕೇಶ್ ಮುಖಂಡರಾದ ಚಂದ್ರಶೇಖರ್, ನಾಗರಾಜು, ಕೈಲಾಶ್, ಸಾಗರ್ ಯಾದವ್, ಪ್ರಸನ್ನಕುಮಾರ್, ಮಂಜಣ್ಣ, ಜಯಗಿರಿ ಸುಂದರ್‌ಜಯರಾಮ್ ಅಭಿನಂದಿಸಿದರು.

ನರೇಗಾ ಯೋಜನೆಯಡಿ ಆಟದ ಮೈದಾನ ನಿರ್ಮಾಣ

ಗುಬ್ಬಿ: ತಾಲೂಕಿನ ಹಾಗಲವಾಡಿಯಲ್ಲಿ ನರೇಗಾ ಯೋಜನೆಯ ಮೂಲಕ ಶಾಲಾ ಕಾಪೌಂಡ್, ಆಟದ ಮೈದಾನ, ಶೌಚಾಲಯ ನಿರ್ಮಿಸಲಾಗಿದೆ. ನಮ್ಮ ಹೊಲ ನಮ್ಮ ದಾರಿ ನರೇಗಾ ಯೋಜನೆಯಲ್ಲಿ ಏಳು ಜಲ್ಲಿ ರಸ್ತೆ ಮಾಡಲಾಗಿದೆ. ಪಿಡಿಒ ಶಿವಕುಮಾರ್‌ಮಾತನಾಡಿ, ಜಲ ಜೀವನ್ ಯೋಜನೆಯಲ್ಲಿ ಕೋಡಿಹಳ್ಳೀ, ಕುರೇಹಳ್ಳೀ, ಶಿವರಾಂಪುರ, ಗುಡ್ಡೇನಹಳ್ಳಿ, ಹಣೇಹಳ್ಳಿ ಭಾಗದಲ್ಲಿ ಮನೆ ಮನೆ ನಲ್ಲಿ ಸಂಪರ್ಕ ಮಾಡಿ ನೀರು ಪೂರೈಕೆ ಮಾಡಲಾಗಿದೆ. ವಸತಿ ಯೋಜನೆ, ಶೌಚಾಲಯ, ಜಾನವಾರು ಶೆಡ್, ಮೇಕೆ ಶೆಡ್, ಡಿಜಿಟಲ್ ಗ್ರಂಥಾಲಯ, ಘನ ತ್ಯಾಜ್ಯ ಘಟಕ ಮಾಡಲಾಗಿದೆ ಎಂದರು. ಗ್ರಾಪಂ ಅಧ್ಯಕ್ಷ ಎಚ್.ಬಿ.ರಮೇಶ್ ಮಾತನಾಡಿ, ನರೇಗಾ ಯೋಜನೆಯಲ್ಲಿ ರೈತರಿಗೆ ಅನುಕೂಲವಾಗುವ ಉದಿ ಬದು ತೆಂಗು ಎಲ್ಲ ಕಾಮಗಾರಿ ಕೆಲಸಗಳು ಕಾಂಪೌಡ್, ಶೌಚಾಲಯ, ಆಟದ ಮೈದಾನ ನಿರ್ಮಾಣ ಮಾಡಲಾಗಿದೆ ಎಂದರು.

ರಾಷ್ಟ್ರಮಟ್ಟದ ಬಾಲಕರ ಖೋಖೋ ಪಂದ್ಯಾವಳಿಯಲ್ಲಿ ಭಾಗವಹಿಸಿ ಬೆಳ್ಳಿಯ ಪದಕ ಪಡೆದ ಶಿರಾದ ಕದಂಬ ಶಾಲೆಯ ವಿದ್ಯಾರ್ಥಿಗಳಾದ ಶ್ರೇಯಸ್, ಗೌತಮ್.ಆರ್, ಶಶಾಂಕ್, ಶಿವು ಹಾಗೂ ತರಬೇತುದಾರ ಇದ್ದಾರೆ.

ತಿಪಟೂರಿನ ನೊಣವಿನಕೆರೆ ಶ್ರೀ ಕಾಡಸಿದ್ದೇಶ್ವರ ಮಠದಲ್ಲಿ ಬನ್ನಿಪೂಜೆ ಮಾಡಲಾಯಿತು.ಶ್ರೀ ಕಾಡ ಸಿದ್ದೇಶ್ವರ ಮಠದ ಡಾ. ಕರಿವೃಷಭ ದೇಶಿಕೇಂದ್ರ ಸ್ವಾಮೀಜಿ, ಮಠದ ಕಿರಿಯ ಸ್ವಾಮೀಜಿ, ಗ್ರಾಮದ ಹಾಗೂ ಸುತ್ತಮುತ್ತಲಿರುವ ಪಟ್ಟಣದ ಭಕ್ತರು ಇದ್ದಾರೆ.

ಶಿರಾದ ಭವಾನಿ ನಗರದ ಅಂಬಾ ಭವಾನಿ ಅಮ್ಮನವರ ಉತ್ಸವ ಮೂರ್ತಿಯನ್ನು ಮೆರವಣಿಗೆ ಮೂಲಕ ಬನ್ನಿ ಮಂಟಪಕ್ಕೆ ಶಮಿ ಪೂಜೆಗೆ ಕರೆದೊಯ್ಯಲಾಯಿತು. ದೇವಾಲಯ ನಿರ್ವಹಣಾ ಸಮಿತಿಯ ಸದಸ್ಯರು, ಅಖಿಲ ಕರ್ನಾಟಕ ಲಾಡರ ಸಂಘದ ಸದಸ್ಯರು ಇದ್ದಾರೆ.

ಜನಸ್ನೇಹಿ ಆಡಳಿತ ಬಲಪಡಿಸಲು ಕೈಜೋಡಿಸಿ

ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಮನವಿ | ವಿಡಿಯೋ ಕಾನ್ಫರೆನ್ಸ್ ಮೂಲಕ ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ಸಭೆ

• **ಕನ್ನಡಪ್ರಭ ವಾರ್ತೆ** ತುಮಕೂರು

ಕಂದಾಯ ಇಲಾಖೆ ವ್ಯಾಪ್ತಿಗೆ ಬರುವ ಸಾಗುವಳಿ ಚೀಟಿ, ಬಗರ್‌ಹುಕುಂ, ಆಧಾರ್‌ಸೀಡಿಂಗ್, ಪಿಂಚಣಿ, ಸೇರಿದಂತೆ ವಿವಿಧ ಸೌಲಭ್ಯಕ್ಕಾಗಿ ಸಾರ್ವಜನಿಕರು ಸಲ್ಲಿಸಿರುವ ಅರ್ಜಿಗಳನ್ನು ಶೀಘ್ರವಾಗಿ ವಿಲೇವಾರಿ ಮಾಡುವಂತೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಕೇಸ್ವಾನ್ ಸಭಾಂಗಣದಲ್ಲಿ ವಿಡಿಯೋ ಕಾನ್ಫರೆನ್ಸ್ ಮೂಲಕ ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ಸೋಮವಾರ ಸಭೆ ನಡೆಸಿ ಮಾತನಾಡಿದರು. ಜಿಲ್ಲೆಯಲ್ಲಿ ಜನಸ್ನೇಹಿ ಆಡಳಿತವನ್ನು ಬಲಪಡಿಸುವ ನಿಟ್ಟಿನಲ್ಲಿ ಸಾರ್ವಜನಿಕರಿಂದ ಸ್ವೀಕೃತವಾದ ಅರ್ಜಿಗಳನ್ನು ವಿಳಂಬ ಮಾಡದೆ ನಿಗಧಿತ ಅವಧಿಯೊಳಗೆ ವಿಲೇವಾರಿ ಮಾಡುವಂತೆ ಸೂಚನೆ ನೀಡಿದರು.

ಜಿಲ್ಲೆಯು ಆಧಾರ್‌ಸೀಡಿಂಗ್‌ನಲ್ಲಿ ಶೇ. 85.9 ಗುರಿ ಸಾಧಿಸಿದ್ದು, ಬಾಕಿ ಇರುವ ಆಧಾರ್‌ಸೀಡಿಂಗ್ ಅರ್ಜಿಗಳನ್ನು ವಿಲೇವಾರಿ ಮಾಡಬೇಕು. ಬಗರ್‌ಹುಕುಂ ಸಂಬಂಧಿಸಿದಂತೆ 496, ಸಕಾಲಕ್ಕೆ ಸಂಬಂಧಿಸಿದಂತೆ 281, ಪಿಂಚಣಿ 1284, ಆರ್‌ಟಿಸಿ ತಿದ್ದುಪಡಿ 2932 ಅರ್ಜಿಗಳು ಬಾಕಿ ಇದ್ದು ಕಾನೂನು ತೊಡಕಿಲ್ಲದ ಅರ್ಜಿಗಳನ್ನು ವಿಳಂಬ ಮಾಡದೆ ವಿಲೇವಾರಿ ಮಾಡುವಂತೆ ತಿಳಿಸಿದರು.

ಸಾಗುವಳಿ ಮಾಡುತ್ತಿರುವ ದುರಸ್ತಿಯಾಗದ ಸರ್ಕಾರಿ ಭೂಮಿ (ನಮೂನೆ 1-5) ಗೆ ಸಂಬಂಧಿಸಿದಂತೆ ಕಂದಾಯ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪ್ರತಿ ದಿನ ಸುಮಾರು 10 ಗ್ರಾಮಗಳ ಸರ್ವೇ ಕಾರ್ಯವನ್ನು ಕೈಗೊಳ್ಳಬೇಕು. ಉಪವಿಭಾಗಾಧಿಕಾರಿಗಳ ಸಿಬ್ಬಂದಿ ವರ್ಗ ಗ್ರಾಮವಾರು/ಹೋಬಳಿವಾರು ಭೇಟಿ ನೀಡಿ ಪರಿಶೀಲಿಸಿ, ವರದಿ ಸಲ್ಲಿಸಬೇಕು ಎಂದು ಎಲ್ಲಾ ಉಪವಿಭಾಗಾಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಮುಂದಿನ ವಾರದಿಂದ ಜಿಲ್ಲೆಯ ಪ್ರತಿ ಗ್ರಾಮ ಪಂಚಾಯತಿಯಲ್ಲಿ ಪಿಂಚಣಿ ಅದಾಲತ್ ಆಂದೋಲನ ಹಮ್ಮಿಕೊಳ್ಳಬೇಕು. ಅದಾಲತ್ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಆಟೋ ಪ್ರಚಾರಕ್ಕೆ ಕ್ರಮ ಕೈಗೊಳ್ಳಬೇಕು. ಗ್ರಾಮ ಪಂಚಾಯಿತಿಗಳ ಪ್ರತಿ ಮನೆಗೂ ಭೇಟಿ ನೀಡಿ ಪಿಂಚಣಿ ಸೌಲಭ್ಯದಿಂದ ವಂಚಿತರಾದ ಫಲಾನುಭವಿಗಳಿದ್ದಲ್ಲಿ ಪತ್ತೆ ಹಚ್ಚಿ ಅರ್ಹ ಫಲಾನುಭವಿಗಳಿಗೆ ಸೌಲಭ್ಯ ಒದಗಿಸಬೇಕೆಂದು ಸೂಚನೆ ನೀಡಿದರು.

ಭಾರತೀಯ ಹವಾಮಾನ ಇಲಾಖೆ ವರದಿಯಂತೆ ಜಿಲ್ಲೆಯಲ್ಲಿ ಮುಂದಿನ 5 ದಿನಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆ ಇರುವುದರಿಂದ ಆರೆಂಜ್ ಮತ್ತು ಯೆಲ್ಲೊ ಅಲರ್ಟ್ ಘೋಷಿಸಲಾಗಿದ್ದು, ತುರ್ತು ಸಂದರ್ಭದಲ್ಲಿ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕೆಂದು ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಮಳೆಯಿಂದ ಯಾವುದೇ ಜನ, ಜಾನುವಾರುಗಳಿಗೆ ಜೀವ ಹಾನಿಯಾಗದಂತೆ ನದಿ, ಹಳ್ಳ ಕೆರೆ ದಡಗಳಲ್ಲಿ ಬಟ್ಟೆ ತೊಳೆಯುವುದು, ಈಜಾಡುವುದು, ದನ, ಕರುಗಳನ್ನು ಮೇಯಿಸುವುದು ಹಾಗೂ ಅಪಾಯವಿರುವ ಸೇತುವೆಗಳ ಮೇಲೆ ಸಂಚರಿಸುವುದು ಮತ್ತು ಇತರೆ ಚಟುವಟಿಕೆ ನಡೆಸದಂತೆ ಕ್ರಮ ವಹಿಸಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನದಿ ದಡಗಳಲ್ಲಿ ಅಪಾಯವಿರುವ ಸೇತುವೆಗಳಲ್ಲಿ ಫೋಟೋ, ಸೆಲ್ಫಿಗಳನ್ನು ತೆಗೆಯದಂತೆ ಯುವಕ, ಯುವತಿಯರಿಗೆ ಮತ್ತು ಸಾರ್ವಜನಿಕರಿಗೆ ತಿಳಿಹೇಳಬೇಕು. ಭಾರಿ ಮಳೆ ಪ್ರವಾಹದಿಂದ ಯಾವುದೇ ಅಹಿತಕರ ಘಟನೆಯಾಗದಂತೆ ಪ್ರತಿ ಗ್ರಾಮಗಳಲ್ಲಿ ಡಂಗೂರ ಸಾರಬೇಕು ಹಾಗೂ ಧ್ವನಿ ವರ್ಧಕದ ಮೂಲಕ ಜಾಗೃತಿ ಮೂಡಿಸಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

ನಿರಂತರ ಮಳೆಯಿಂದ ಅಪಾಯವಿರುವ ಮನೆ, ಗೋಡೆ ಇತರೆ ಕಟ್ಟಡಗಳು ಕುಸಿದು ಸಾವು- ನೋವುಗಳು ಸಂಭವಿಸುವುದರಿಂದ ಸಾರ್ವಜನಿಕರು ಸುರಕ್ಷಿತ ಸ್ಥಳಗಳಲ್ಲಿರುವಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು. ರಾಜ್ಯ, ಜಿಲ್ಲಾಡಳಿತ, ತಾಲೂಕು ಆಡಳಿತದಿಂದ ನೀಡುವ ಹವಾಮಾನದ ಮುನ್ನೆಚ್ಚರಿಕೆಯನ್ನು ಪ್ರತಿ ಗ್ರಾಮ ಪಂಚಾಯತಿ ಮಟ್ಟದಲ್ಲಿ ವಿಪತ್ತು ನಿರ್ವಹಣಾ ಸಮಿತಿಗಳು ನೀಡುವ ಮುನ್ನೆಚ್ಚರಿಕಾ ಕ್ರಮಗಳ ಬಗ್ಗೆ ಹೆಚ್ಚು ಪ್ರಚಾರ ಕೈಗೊಂಡು ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು ಎಂದರು.

ಕೆರೆ-ಕಟ್ಟೆ, ಏರಿ, ಬಂಡು, ಕೋಡಿಗಳಲ್ಲಿ ನೀರು ಸೋರಿಕೆ ಕಂಡು ಬಂದಲ್ಲಿ, ರಸ್ತೆಗಳ ಮೇಲೆ ಅಪಾಯಕಾರಿ ಮಟ್ಟದಲ್ಲಿ ನೀರು ಹರಿಯುತ್ತಿದ್ದಲ್ಲಿ/ನಿಂತಿದ್ದಲ್ಲಿ ಮರಬಿದ್ದು ವಾಹನ ಸಂಚಾರ ಸ್ಥಗಿತವಾಗಿದ್ದಲ್ಲಿ, ವಿದ್ಯುತ್ ಮಾರ್ಗ/ಕಂಬ ಬಿದ್ದಿದ್ದಲ್ಲಿ ಮನೆಯೊಳಗೆ ನೀರು ನುಗ್ಗಿದರೆ. ಮನೆಗೋಡೆ/ಮೇಲ್ಚಾವಣಿ ಬಿದ್ದರೆ, ಬೆಳೆ ನಷ್ಟ ಮತ್ತಿತರ ತುರ್ತು ಪರಿಸ್ಥಿತಿಯಲ್ಲಿ ಸಹಾಯವಾಣಿ ಸಂಖ್ಯೆ, 7304975519 ಸಂಪರ್ಕಿಸಬೇಕೆಂದು ಸಾರ್ವಜನಿಕರಿಗೆ ಮಾಹಿತಿ ನೀಡಬೇಕೆಂದು ಸೂಚಿಸಿದರು.

ಅಪರ ಜಿಲ್ಲಾಧಿಕಾರಿ ಡಾ. ಎನ್. ತಿಪ್ಪೇಸ್ವಾಮಿ, ಉಪವಿಭಾಗಾಧಿಕಾರಿ ಗೌರವ್ ಕುಮಾರ್‌ಶೆಟ್ಟಿ, ಚುನಾವಣೆ ತಹಶೀಲ್ದಾರ್‌ರೇಷ್ಮಾ, ತಹಸೀಲ್ದಾರ್ ರಾಜೇಶ್ವರಿ, ವರದರಾಜು ಉಪಸ್ಥಿತರಿದ್ದರು.

ಬಸವಣ್ಣರ ಆದರ್ಶ ಮೈಗೂಡಿಸಿಕೊಳ್ಳಿ

ಕೇಂದ್ರ ಸಚಿವ ವಿ.ಸೋಮಣ್ಣ ಸಲಹೆ | ಬಸವ ಜಯಂತಿ, ಅಭಿನಂದನಾ ಸಮಾರಂಭ

• **ಕನ್ನಡಪ್ರಭ ವಾರ್ತೆ** ತುರುವೇಕೆರೆ

ವಿಶ್ವಗುರು ಬಸವಣ್ಣ, ಬುದ್ಧ, ಡಾ. ಬಾಬಾ ಸಾಹೇಬ್ ಅಂಬೇಡ್ಕರ್‌ಇಡೀ ವಿಶ್ವದ ಭೂಪಟದಲ್ಲಿ ದೊಡ್ಡ ಸಂಪತ್ತು ಎಂದು ಕೇಂದ್ರ ರೈಲ್ವೆ ಹಾಗೂ ಜಲಶಕ್ತಿ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದರು.

ಪಟ್ಟಣದ ಸಿದ್ದರಾಮೇಶ್ವರ ಸಮುದಾಯ ಭವನದಲ್ಲಿ ಹಮ್ಮಿಕೊಂಡಿದ್ದ ಬಸವೇಶ್ವರ ಜಯಂತಿ, ಅಭಿನಂದನಾ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಮಾತನಾಡಿದರು. 12 ನೇ ಶತಮಾನದಲ್ಲಿಯೇ ಅನುಭವ ಮಂಟಪವನ್ನು ನಿರ್ಮಿಸಿದ್ದ ಬಸವಣ್ಣರನ್ನು ವಿಶ್ವವೇ ಮೆಚ್ಚಿದೆ. ಬಸವಣ್ಣರು ಹಾಕಿಕೊಟ್ಟ ಮಾರ್ಗದಲ್ಲಿ ಅವರ ವಿಚಾರಧಾರೆ, ಆದರ್ಶಗಳನ್ನುಎಲ್ಲರೂಮೈಗೂಡಿಸಿಕೊಂಡು ಜೀವನ ನಡೆಸಬೇಕಿದೆ ಎಂದರು.

ಇವನ್ಯಾರವ ಇವನ್ಯಾರವ ಎನ್ನದೇ ಇವ ನಮ್ಮವ ಎನ್ನುವಂತೆ ವೀರಶೈವ ಲಿಂಗಾಯಿತ ಸಮಾಜ ಬಾಳಬೇಕಿದೆ. ಬೇರೆಯವರನ್ನು ಬಹಳ ಗೌರವ, ಪ್ರೀತಿ ವಿಶ್ವಾಸದಿಂದ ಕಾಣುವ ವೀರಶೈವ ಲಿಂಗಾಯಿತ ಸಮಾಜ ಸಣ್ಣ ಪುಟ್ಟ ತಪ್ಪುಗಳಿಂದ ಎರಡು ಮೂರು ಗುಂಪುಗಳಾಗುತ್ತಿದೆ. ಇದನ್ನು ಬಿಡಬೇಕು ಎಲ್ಲರೂ ಒಗ್ಗಟ್ಟಾಗಿ ಸಮಾಜ ಕಟ್ಟುವ ಕೆಲಸವನ್ನು ಮಾಡಬೇಕು ಎಂದರು.

ಎಲ್ಲ ಜಾತಿಯವರಿಗೂ ಪ್ರತಿಭಾ ಪುರಸ್ಕಾರ: ಬಸವಣ್ಣ ಕೇವಲ ವೀರಶೈವ ಲಿಂಗಾಯಿತ ಸಮಾಜಕ್ಕೆ ಮಾತ್ರ ಸೀಮಿತರಾಗಿಲ್ಲ, ಪ್ರತಿಭಾ ಪುರಸ್ಕಾರ ಕೇವಲ ಲಿಂಗಾಯಿತ ಸಮಾಜಕ್ಕೆ ಮೀಸಲು ಮಾಡಬೇಡಿ. 12 ನೇ ಶತಮಾನದಲ್ಲಿಯೇ ಜಾತಿಯತೆಯನ್ನು ತೊಡೆದು ಹಾಕಿ ಸಮಾನತೆ ಸಾರಿದ ಮಹಾನ್ ಪುರುಷರು ಅವರ ಆಶಯದಂತೆ ಮುಂದಿನ ದಿನಗಳಲ್ಲಿ ಎಲ್ಲ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಪ್ರತಿಭಾ ಪುರಸ್ಕಾರ ನೀಡಿ, ನಾನು ಕೈಜೋಡಿಸುತ್ತೇನೆ ಎಂದು ಭರವಸೆ ನೀಡಿದರು.

ನರೇಂದ್ರಮೋದಿದೇಶದಪ್ರಧಾನಿಯಾಗಿ ದಣಿವರಿಯದ ನಾಯಕರಾಗಿದ್ದಾರೆ. ಸದಾ ದೇಶದ ಅಭಿವೃದ್ಧಿ ಬಗ್ಗೆ ಚಿಂತಿಸುತ್ತಾರೆ. ವಿಶ್ವದಲ್ಲಿಯೇ ಭಾರತ ದೇಶವನ್ನು 6ನೇ ಸ್ಥಾನದಲ್ಲಿ ಬರುವಂತೆ ಮಾಡಿದ್ದಾರೆ. ಇನ್ನು ಮೂರ್ನಾಲ್ಕು ವರ್ಷದಲ್ಲಿ ವಿಶ್ವದಲ್ಲಿಯೇ 1 ಅಥವಾ 2ನೇ ಸ್ಥಾನದಲ್ಲಿ ಬರುವಂತೆ ಮಾಡಲಿದ್ದಾರೆ ಎಂದು ಹೇಳಿದರು.

ಶಾಸಕ ಎಂ.ಟಿ.ಕೃಷ್ಣಪ್ಪ ಮಾತನಾಡಿ, ಸಚಿವ ವಿ. ಸೋಮಣ್ಣ ಉತ್ತಮ ಕೆಲಸಗಾರರು. ಅಭಿವೃದ್ಧಿ ಬಗ್ಗೆ ಸದಾ ಚಿಂತನೆ ನಡೆಸುವವರು. ಜಿಲ್ಲೆಯನ್ನು ಹೆಚ್ಚಿನ ಅಭಿವೃದ್ಧಿ ಕೆಲಸ ಮಾಡಲಿ ಎಂದರು.

ಜಾನಪದ ಹಾಡು ಹಾಡಿದ ಶಾಸಕ ಕೃಷ್ಣಪ್ಪ: ಕೇಂದ್ರಸಚಿವವಿ.ಸೋಮಣ್ಣಕಾರ್ಯಕ್ರಮಕ್ಕೆ ಆಗಮಿಸಲುಎರಡುಗಂಟೆತಡವಾಗಿದ್ದರಿಂದ ವೇದಿಕೆಯಲ್ಲಿ ಹಲವರು ಬಸವಣ್ಣರ ವಚನ ಹಾಡಿ ರಂಜಿಸಿದರು. ಶಾಸಕ ಎಂ.ಟಿ.ಕೃಷ್ಣಪ್ಪ ಚನ್ನಪ್ಪ ಚನ್ನೇಗೌಡ ಎಂಬ ಜಾನಪದ ಹಾಡು ಹಾಡಿದರು.

ಚಿರಪಟ್ಟಾಧ್ಯಕ್ಷ ಮೃತ್ಯಂಜಯದೇಶಿಕೇಂದ್ರ ಸ್ವಾಮೀಜಿ, ಕರಿವೃಷಭದೇಶಿಕೇಂದ್ರ ಶಿವಯೋಗಿಶ್ವರ ಸ್ವಾಮೀಜಿ, ಅಖಿಲ ಭಾರತ ವೀರಶೈವ ಲಿಂಗಾಯಿತ ಮಹಾಸಭಾದ ತಾಲೂಕು ಅಧ್ಯಕ್ಷ ಎಸ್.ಎಂ. ಕುಮಾರಸ್ವಾಮಿ, ಮಾಜಿ ಶಾಸಕರಾದ ಎಚ್ ನಂಜೇಗೌಡ, ಎಂ.ಡಿ.ಲಕ್ಷ್ಮೀನಾರಾಯಣ್, ತಹಸೀಲ್ದಾರ್ ಎ.ಎನ್. ಕು0.ಇ ಅಹಮದ್, ಬಿಇಓ ಸೋಮಶೇಖರ್, ಇದ್ದರು.

ತುರುವೇಕೆರೆಯ ಸಿದ್ದರಾಮೇಶ್ವರ ಸಮುದಾಯ ಭವನದಲ್ಲಿ ನಡೆದ ಬಸವೇಶ್ವರ ಜಯಂತಿ ಸಮಾರಂಭದಲ್ಲಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಸನ್ಮಾನಿಸಲಾಯಿತು.

ಶ್ರೀ ಶಂಕರೇಶ್ವರ ಸ್ವಾಮಿಗೆ ವಿಶೇಷ ಪೂಜೆ ಸಲ್ಲಿಕೆ

ತಿಪಟೂರು: ತಾಲೂಕಿನಪ್ರಸಿದ್ಧಯಾತ್ರಾಕ್ಷೇತ್ರವಾದ ಕೆರಗೋಡಿ-ರಂಗಾಪುರ ಸುಕ್ಷೇತ್ರದ ಶ್ರೀ ಶಂಕರೇಶ್ವರಸ್ವಾಮಿಗೆ ದಸರಾ ಪ್ರಯುಕ್ತ ವಿಶೇಷ ಅಲಂಕಾರ ಮಾಡಲಾಗಿತ್ತು. ಅಪಾರ ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ಸ್ವಾಮಿ ದರ್ಶನಾಶೀರ್ವಾದ ಪಡೆದರು.

17ರಿಂದ ಯೋಗ ಸಮಿತಿಯಿಂದ ಪ್ರಶಿಕ್ಷಣ ಶಿಬಿರ

ಮಧುಗಿರಿ: ಇಲ್ಲಿನ ಕುಂಚಿಟಿಗ ಒಕ್ಕಲಿಗರ ಸಮುದಾಯ ಭವನದಲ್ಲಿ ಅ.17 ರಿಂದ ಅ. 20ರವರೆಗೆ ಶ್ರೀಪತಂಜಲಿ ಯೋಗ ಶಿಕ್ಷಣ ಸಮಿತಿಯಿಂದ ಪ್ರಾಥಮಿಕ ಯೋಗ ಪ್ರಶಿಕ್ಷಣ ಶಿಬಿರ ಆಯೋಜಿಸಲಾಗಿದೆ ಎಂದು ಸಮಿತಿಯ ಸಂಚಾಲಕ ನರಸಿಂಹಮೂರ್ತಿ ತಿಳಿಸಿದರು.ಪಟ್ಟಣದಲ